ಆ) ಹಾಗಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹರಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ಒದಗಿಸುವುದು);

ಕು.ಶೋಭಾ ಕರಂದ್ಲಾಜೆ(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಬಂದಿದೆ.

ಆ) ಮೊಳಕಾಲ್ಮೂರು ಕ್ಷೇತ್ರದ ಸಮಸ್ಯಾತ್ಮಕ ಗ್ರಾಮಗಳಿಗೆ ತುರ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಟಾಸ್ಕ್‌ಫೋರ್ಸ್‌ನಡಿ ಅಗತ್ಯ ಕ್ರಮವಹಿಸಲಾಗಿದೆ. ರಾಜ್ಯ ಮತ್ತು ಕೇಂದ್ರ ವಲಯಗಳಡಿ ಇದಕ್ಕೆ ಪೂರಕವಾಗಿ ರೂ.224.00 ಲಕ್ಷ ಅಂದಾಜಿನ ಕ್ರಿಯಾ ಯೋಜನೆ ಅನುಮೋದಿಸಲಾಗಿದೆ. ಇದಲ್ಲದೇ, ಕುಡಿಯುವ ನೀರಿನ ಗುಣಮಟ್ಟದ ಸಮಸ್ಯೆಗಳಿರುವ ಜನವಸತಿಗಳಿಗೆ ಶಾಶ್ವತ ಹಾಗೂ ಸುರಕ್ಷಿತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ರೇವಲಕುಂಟೆ ಹಾಗೂ ಇತರೆ 26 ಗ್ರಾಮಗಳಿಗೆ ಅನುಕೂಲವಾಗುವಂತೆ ರೂ. 901.52 ಲಕ್ಷ ಅಂದಾಜಿನ ಯೋಜನೆ ಮಂಜೂರು ಮಾಡಿದ್ದು ಕಾಮಗಾರಿ ಪ್ರಗತಿಯಲ್ಲಿದೆ. ವಿಶೇಷ ಅಭಿವೃದ್ಧಿ ಯೋಜನೆಯಡಿ ಕುಡಿಯುವ ನೀರಿನಲ್ಲಿ ಅಧಿಕ ಫ್ಲೋರೈಡ್ ಅಂಶವಿರುವ ಸದರಿ ತಾಲ್ಲೂಕಿನ ಗ್ರಾಮಗಳಿಗೆ ಪರ್ಯಾಯ ಯೋಜನೆ ಒದಗಿಸಲು ರೂ.71.39 ಲಕ್ಷ ಅಂದಾಜಿನಲ್ಲಿ ಯೋಜನೆಗಳನ್ನು ರೂಪಿಸಲಾಗುತ್ತಿದೆ.

1137 ಶ್ರೀ ಗೋಪಾಲಕೃಷ್ಣ ಎನ್.ವೈ.(ಮೊಳಕಾಲ್ಮೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿತ್ರದುರ್ಗ ಜಿಲ್ಲೆ, ಮೊಳಕಾಲ್ಮೂರು ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ತಳಕು ಹೋಬಳಿಯು ಆಂಧ್ರ ಪ್ರದೇಶದ ಭಾಗದಲ್ಲಿದ್ದು, ಅಲ್ಲಿ ವಾಸಿಸುತ್ತಿರುವ ಜನರು ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯ ಒದಗಿಸುವ ವಿಷಯದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು (ಪೂರ್ಣ ವಿವರವನ್ನು ನೀಡುವುದು)?

ಕು.ಶೋಭಾ ಕರಂದ್ಲಾಜೆ(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) ಬಂದಿದೆ.

ಆ) 2007–08 ಮತ್ತು 2008–09ರ ಸಾಲಿನಲ್ಲಿ ಸದರಿ ತಳಕು ಹೋಬಳಿ ಗ್ರಾಮಗಳಿಗೆ ಮೂಲಭೂತ ಸೌಕರ್ಯವನ್ನು ಒದಗಿಸಲು ವಿವಿಧ ಯೋಜನೆಗಳಲ್ಲಿ ಒಟ್ಟು ರೂ.2.46 ಕೋಟಿ ಅಂದಾಜು ಮೊತ್ತದ 40 ರಸ್ತೆ

ಅಭಿವೃದ್ಧಿ ಕಾಮಗಾರಿಗಳು ಹಾಗೂ ರೂ.1.19 ಕೋಟಿ ಅಂದಾಜು ಮೊತ್ತದ 45 ಕುಡಿಯುವ ನೀರಿನ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.

799 ಶ್ರೀ ಮಹದೇವಪ್ರಸಾದ್ ಹೆಚ್.ಎಸ್.(ಗುಂಡ್ಲುಪೇಟೆ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಂಡ್ಲುಪೇಟೆ ತಾಲ್ಲೂಕಿನ 139 ಗ್ರಾಮಗಳಿಗೆ ಹಾಗೂ ಚಾಮರಾಜನಗರ ತಾಲ್ಲೂಕಿನ 168 ಗ್ರಾಮಗಳಿಗೆ ಕಾವೇರಿ ನದಿಯಿಂದ ಶುದ್ಧ ಕುಡಿಯುವ ನೀರು ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೇ;

ಆ) ಈ ಯೋಜನೆಯನ್ನು ಸರ್ಕಾರ ಶೀಘ್ರ ಅನುಷ್ಠಾನಕ್ಕೆ ತರಲು ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು)?

ಕು.ಶೋಭಾ ಕರಂದ್ಲಾಜೆ(ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಸಚಿವರು):

ಅ) ಹೌದು.

ಆ) ದಿನಾಂಕ: 18–10–2006ರಂದು ನಡೆದ ರಾಜ್ಯ ಮಟ್ಟದ ಎಂಪವರ್ಡ್ ಸಮಿತಿ ಸಭೆಯಲ್ಲಿ, ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ದೃಷ್ಟಿಯಿಂದ, ಚಾಮರಾಜನಗರ ತಾಲ್ಲೂಕಿನ 166 ಗ್ರಾಮಗಳ ರೂ.60.95 ಕೋಟಿ ಅಂದಾಜಿನ ಹಾಗೂ ಗುಂಡ್ಲುಪೇಟೆ ತಾಲ್ಲೂಕಿನ 131 ಗ್ರಾಮಗಳ ರೂ.42.00 ಕೋಟಿ ಅಂದಾಜಿನ ಪ್ರಾಂತೀಯ ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ತಾತ್ವಿಕ ಅನುಮೋದನೆಗೆ ನೀಡಲಾಗಿದೆ. ಹೆಚ್ಚುವರಿ ಅನುದಾನ ಬಿಡುಗಡೆಗಾಗಿ ಭಾರತ ಸರ್ಕಾರಕ್ಕೆ ಮಾಡಿದ ವಿಶೇಷ ಪ್ರಸ್ತಾವನೆಗೆ ಒಪ್ಪಿಗೆ ದೊರೆತಿಲ್ಲ. ಆದುದರಿಂದ, ಈ ಬೃಹತ್ ಯೋಜನೆಗಳನ್ನು ಅನುದಾನದ ಲಭ್ಯತೆ ಆಧರಿಸಿ ಹಂತಹಂತವಾಗಿ ಅನುಷ್ಠಾನಗೊಳಿಸಲು ಪರಿಶೀಲಿಸಲಾಗುವುದು.

1141 ಶ್ರೀ ಸಿದ್ದು ಸವದಿ (ತೇರದಾಳ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉದ್ಯೋಗ ಖಾತ್ರಿ ಯೋಜನೆಯಲ್ಲಿ ಮಂಜೂರಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು;

ಆ) ಈ ಅನುದಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಮಾರ್ಗಸೂಚಿಯಲ್ಲಿ ಬದಲಾವಣೆ ಮಾಡಲು ಇರುವ ತೊಂದರೆಗಳೇನು;